# ಮೈಸೂರು ವಿಶ್ವವಿದ್ಯಾನಿಲಯ

ಡಾ. ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಸುವರ್ಣಗಂಗೋತ್ರಿ, ಚಾಮರಾಜನಗರ ಸಭಾಂಗಣದಲ್ಲಿ ದಿನಾಂಕ 23-02-2021 ರಂದು ಮಂಗಳವಾರ 12-00 ಗಂಟೆಗೆ ನಡೆದ ಸಿಂಡಿಕೇಟಿನ ಎರಡನೇ ಸಾಮಾನ್ಯ ಸಭೆಯ ನಡವಳಿ.

**ಹಾಜರಿದ್ದ ಸದಸ್ಯರುಗಳು:**

| | | |
|---|---|---|
| 1. | ಪ್ರೊ. ಜಿ.ಹೇಮಂತಕುಮಾರ್ | ಕುಲಪತಿಗಳು ಹಾಗೂ ಅಧ್ಯಕ್ಷರು |
| 2. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 3. | ಪ್ರೊ. ಜಿ.ವೆಂಕಟೇಶ್ ಕುಮಾರ್ | ಸದಸ್ಯರು |
| 4. | ಶ್ರೀ ಎಂ.ಬಿ. ಗಪ್ಪಣ್ಣ | ಸದಸ್ಯರು |
| 5. | ಡಾ. ಚೈತ್ರ ನಾರಾಯಣ | ಸದಸ್ಯರು |
| 6. | ಶ್ರೀ ಕುಮಾರ | ಸದಸ್ಯರು |
| 7. | ಶ್ರೀಮತಿ ಕೆ. ನಾಗರತ್ನಮ್ಮ | ಸದಸ್ಯರು |
| 8. | ಡಾ. ರಾಜಣ್ಣ ಬಿ. | ಸದಸ್ಯರು |
| 9. | ಡಾ. ವೆಂಕಟೇಶ್ ಜೆ.ಎನ್. | ಸದಸ್ಯರು |
| 10. | ಶ್ರೀ ಆರ್.ಪ್ರದೀಪ್‌ಕುಮಾರ್ ದೀಕ್ಷಿತ್ | ಸದಸ್ಯರು |
| 11. | ಶ್ರೀ ಎಸ್.ಡಿ.ದೊಡ್ಡಚಾರಿ | ಸದಸ್ಯರು |
| 12. | ಶ್ರೀಮತಿ ಪವಿತ್ರ.ಕೆ | ಸದಸ್ಯರು |
| 13. | ಡಾ. ಈ.ಸಿ. ನಿಂಗರಾಜ್‌ಗೌಡ | ಸದಸ್ಯರು |
| 14. | ಡಾ. ಎಂ.ಎಸ್.ದಾಮೋದರ | ಸದಸ್ಯರು |
| 15. | ಪ್ರೊ. ಎ.ಪಿ.ಜ್ಞಾನ ಪ್ರಕಾಶ್, ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 16. | ಪ್ರೊ. ಟಿ.ಎಸ್.ದೇವರಾಜ, ಹಣಕಾಸು ಅಧಿಕಾರಿಗಳು | ಸದಸ್ಯರು |
| 17. | ಪ್ರೊ. ಆರ್.ಶಿವಪ್ಪ | ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ |

**ಹಾಜರಾಗದ ಸದಸ್ಯರು:**

1. ಡಾ. ಸೈಯದ್ ಕಾರ್ರು ಮೊಹಿದ್ದೀನ್, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
5. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.

ಮೊದಲಿಗೆ ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಸಭೆಗೆ ಹಾಜರಿದ್ದ ಸದಸ್ಯರುಗಳನ್ನು ಹೃತ್ಪೂರ್ವಕವಾಗಿ ಸಭೆಗೆ ಸ್ವಾಗತಿಸಿದರು.

ಪ್ರೊ. ಎನ್.ನಿರಂಜನ್ ನಿಕ್ಕಂ, ಪತ್ರಕರ್ತರು ಇವರು ವಿಶ್ವವಿದ್ಯಾನಿಲಯದಲ್ಲಿ ಶತಮಾನೋತ್ಸವ ಆಚರಣೆಗಾಗಿ ಸಮಾಲೋಚಕರಾಗಿ ನೇಮಕಗೊಂಡು ಅಮೂಲ್ಯವಾದ ಸೇವೆಯನ್ನು ಸಲ್ಲಿಸಿದ್ದರು. ಇವರು

ಇತ್ತೀಚೆಗೆ ನಿಧನರಾಗಿದ್ದು ಮೃತರ ಗೌರವಾರ್ಥ ಎರಡು ನಿಮಿಷಗಳ ಕಾಲ ಮೌನವನ್ನು ಆಚರಿಸುವುದರೊಂದಿಗೆ ಅವರ ಆತ್ಮಕ್ಕೆ ಶಾಂತಿ ಕೋರಲಾಯಿತು.

ಇದುವರೆವಿಗೂ ಸಿಂಡಿಕೇಟ್ ಸದಸ್ಯರಾಗಿ ಸೇವೆ ಸಲ್ಲಿಸಿ ನಿರ್ಗಮಿಸಿರುವ ಪ್ರೊ. ಡಿ. ಆನಂದ, ಡೀನರು, ವಾಣಿಜ್ಯ ನಿಕಾಯ ಇವರ ಸೇವೆಯನ್ನು ಸ್ಮರಿಸಿ ದಾಖಲಿಸಲಾಯಿತು.

ಹೊಸದಾಗಿ ಸಿಂಡಿಕೇಟ್ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಈ ಕೆಳಕಂಡ ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿ, ಪರಿಚಯಿಸಲಾಯಿತು.

1. ಪ್ರೊ. ಜಿ.ವೆಂಕಟೇಶ್ ಕುಮಾರ್, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ, ಮನಃಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
2. ಡಾ. ಬಿ.ರಾಜಣ್ಣ, ಪ್ರಾಂಶುಪಾಲರು, ಪಿ.ಎಲ್.ಎನ್.ಪ್ರಥಮ ದರ್ಜೆ ಕಾಲೇಜು, ಪೂರಿಗಾಲಿ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ.

ಮೊದಲಿಗೆ ಪ್ರೊ. ಶಿವಬಸವಯ್ಯ ಇವರು ಡಾ.ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಸುವರ್ಣಗಂಗೋತ್ರಿ, ಚಾಮರಾಜನಗರ ಸ್ಥಾಪನೆಯಾದ ದಿನದಿಂದ ಇಂದಿನ ದಿನದವರೆಗೆ ಕೇಂದ್ರವು ಬೆಳೆದು ಬಂದ ಹಾದಿ ಹಾಗೂ ಅದರ ಅಭಿವೃದ್ಧಿಕಾರ್ಯಗಳ ಬಗ್ಗೆ ಸಂಕ್ಷಿಪ್ತವಾಗಿ Power Point Presentation ಮೂಲಕ ಪ್ರಸ್ತುತಪಡಿಸಿದರು.

ತದನಂತರ, ಮಾನ್ಯ ಕುಲಪತಿಗಳು ಸಭೆಗೆ ಆಗಮಿಸಿದ್ದ ಎಲ್ಲಾ ಸದಸ್ಯರುಗಳನ್ನು ಸ್ವಾಗತಿಸಿ, ಕಾರ್ಯಸೂಚಿಯಲ್ಲಿನ ವಿಷಯಗಳನ್ನು ಸಭೆಯಲ್ಲಿ ಮಂಡಿಸಿದರು.

| ವಿಷಯ ಸಂಖ್ಯೆ | ವಿಷಯ ಸಂಕ್ಷಿಪ್ತವಾಗಿ |
|---|---|
| **ಸಾಮಾನ್ಯ ಸಭೆ 2021/2.1** | 2020–21ನೇ ಶೈಕ್ಷಣಿಕ ಸಾಲಿನ ಹಾಸನದ 'ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| **ತೀರ್ಮಾನ** | 2020–21ನೇ ಶೈಕ್ಷಣಿಕ ಸಾಲಿನ ಹಾಸನದ 'ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2021/2.2** | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬನ್ನಿಮಂಟಪದಲ್ಲಿರುವ ಸೆಂಟ್ ಫಿಲೋಮಿನಾಸ್ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| **ತೀರ್ಮಾನ** | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬನ್ನಿಮಂಟಪದಲ್ಲಿರುವ ಸೆಂಟ್ ಫಿಲೋಮಿನಾಸ್ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2021/2.3** | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| **ತೀರ್ಮಾನ** | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2021/2.4 | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬಿ.ಎನ್. ರಸ್ತೆಯಲ್ಲಿರುವ ಜೆ.ಎಸ್.ಎಸ್. ಕಲಾ, ವಿಜ್ಞಾನ ಮತ್ತು ವಾಣಿಜ್ಯ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬಿ.ಎನ್. ರಸ್ತೆಯಲ್ಲಿರುವ ಜೆ.ಎಸ್.ಎಸ್. ಕಲಾ, ವಿಜ್ಞಾನ ಮತ್ತು ವಾಣಿಜ್ಯ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.5 | 2020–21ನೇ ಶೈಕ್ಷಣಿಕ ಸಾಲಿನ ಹಾಸನದ ಸರ್ಕಾರಿ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2020–21ನೇ ಶೈಕ್ಷಣಿಕ ಸಾಲಿನ ಹಾಸನದ ಸರ್ಕಾರಿ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.6 | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆ.ಎಸ್.ಎಸ್. ಮಹಿಳಾ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆ.ಎಸ್.ಎಸ್. ಮಹಿಳಾ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.7 | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2020–21ನೇ ಶೈಕ್ಷಣಿಕ ಸಾಲಿನ ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.8 | 2020–21ನೇ ಶೈಕ್ಷಣಿಕ ಸಾಲಿನ ಮಂಡ್ಯದ ಮಹಿಳಾ ಸರ್ಕಾರಿ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2020–21ನೇ ಶೈಕ್ಷಣಿಕ ಸಾಲಿನ ಮಂಡ್ಯದ ಮಹಿಳಾ ಸರ್ಕಾರಿ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.9 | 2020–21ನೇ ಶೈಕ್ಷಣಿಕ ಸಾಲಿನ ಮಂಡ್ಯದ ಸರ್ಕಾರಿ ಮಹಾವಿದ್ಯಾಲಯ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2020–21ನೇ ಶೈಕ್ಷಣಿಕ ಸಾಲಿನ ಮಂಡ್ಯದ ಸರ್ಕಾರಿ ಮಹಾವಿದ್ಯಾಲಯ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.10 | ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನವರಿಗೆ ವಿಶ್ವವಿದ್ಯಾನಿಲಯದ ಪ್ರಾಧಿಕಾರವಾದ ಸಿಂಡಿಕೇಟ್ ಸಭೆಯಲ್ಲಿ 25 ಲಕ್ಷ ದಂಡ ವಿಧಿಸಿರುವುದನ್ನು ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿದ್ದು ನ್ಯಾಯಾಲಯವು ಸದರಿ ಕಾಲೇಜಿನವರು ಸಲ್ಲಿಸಿದ ಮನವಿಯನ್ನು ಎತ್ತಿಹಿಡಿದು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಪ್ರಾಧಿಕಾರಕ್ಕೆ ಕಾಲೇಜಿನವರ ಮನವಿಯನ್ನು ಪರಿಗಣಿಸಿ ಸದರಿ ಕಾಲೇಜಿಗೆ ಅವಕಾಶ ನೀಡುವ ಬಗೆಗೆ ಸಿಂಡಿಕೇಟ್ ಸಭೆಯಲ್ಲಿ ನಿರ್ಣಯ ಕೈಗೊಳ್ಳುವಂತೆ ತಿಳಿಸಿರುವ ಬಗೆಗೆ. |

| | |
|---|---|
| ತೀರ್ಮಾನ | ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನವರಿಗೆ ವಿಶ್ವವಿದ್ಯಾನಿಲಯವು ವಿಧಿಸಿರುವ ದಂಡ ಶುಲ್ಕ ಸಂಬಂಧ ಸುದೀರ್ಘವಾಗಿ ಚರ್ಚಿಸಿದ ಸಭೆಯು ಕುಲಪತಿಯವರಿಗೆ ಅಧಿಕಾರವನ್ನು ನೀಡಿದ್ದು ಅದನ್ನು ಮುಂದಿನ ಸಿಂಡಿಕೇಟ್ ಸಭೆಯುಲ್ಲಿ ಮಂಡಿಸಲು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/2.11 | ಭೂಗೋಳಶಾಸ್ತ್ರ, ಮಾನವಶಾಸ್ತ್ರ, ತತ್ವಶಾಸ್ತ್ರ ಅಧ್ಯಯನ ವಿಭಾಗಗಳ ಅಧ್ಯಕ್ಷರನ್ನು ನೇಮಿಸಲು ಸಿಂಡಿಕೇಟಿನ ಅನುಮೋದನೆಗಾಗಿ. |
| ತೀರ್ಮಾನ | ಪ್ರೊ. ಬಿ.ಚಂದ್ರಶೇಖರ, ಪ್ರಾಧ್ಯಾಪಕರು, ಭೂಗೋಳಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರನ್ನು ದಿನಾಂಕ 07-03-2019 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ವಿಭಾಗದ ಅಧ್ಯಕ್ಷರಾಗಿ ನೇಮಕ ಮಾಡಲಾಗಿದ್ದು ಇವರ ಅಧ್ಯಕ್ಷರ ಅವಧಿಯು ದಿನಾಂಕ 06-03-2021ಕ್ಕೆ ಮುಗಿದಿರುವುದರಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರ, ನೇಮಕ ಮಾಡುವ ಸಂಬಂಧ ಪ್ರೊ. ಜಿ. ವೆಂಕಟೇಶ್ ಕುಮಾರ್ ಇವರು ಮಾತನಾಡಿ, ಪ್ರೊ.ಬಿ.ಚಂದ್ರಶೇಖರಗಿಂತ ಜೇಷ್ಠತೆಯಲ್ಲಿ ಹಿರಿಯರಾಗಿರುವ ಪ್ರೊ.ಹೆಚ್.ನಾಗರಾಜು ಅವರನ್ನು ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡದಿರುವುದು ಗಮನಕ್ಕೆ ಬಂದಿರುತ್ತದೆ. ಆದುದರಿಂದ ಭೂಗೋಳಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರ ನೇಮಕಾತಿ ಸಂಬಂಧ ಮತ್ತೊಮ್ಮೆ ಪುನರವಲೋಕಿಸುವುದು ಸೂಕ್ತವೆಂದು ಅಭಿಪ್ರಾಯಿಸಿದರು. ಈ ಪ್ರಸ್ತಾವನೆಯನ್ನು ಸಿಂಡಿಕೇಟ್ ಸಭೆಯು ಪುರಸ್ಕರಿಸಿತು.<br><br>ಪ್ರೊ. ಎಂ.ಆರ್.ಗಂಗಾಧರ್, ಪ್ರಾಧ್ಯಾಪಕರು, ಮಾನವಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರನ್ನು ದಿನಾಂಕ 31-03-2019 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ವಿಭಾಗದ ಅಧ್ಯಕ್ಷರಾಗಿ ನೇಮಕ ಮಾಡಲಾಗಿತ್ತು. ಇವರ ವಿಭಾಗದ ಅಧ್ಯಕ್ಷರ ಅವಧಿಯು ದಿನಾಂಕ 30-03-2021 ಕ್ಕೆ ಮುಕ್ತಾಯಗೊಳ್ಳುತ್ತದೆ. ಸದರಿ ವಿಭಾಗದಲ್ಲಿ ಇವರನ್ನು ಬಿಟ್ಟು ಬೇರೆ ಯಾರು ಖಾಯಂ ಪ್ರಾಧ್ಯಾಪಕರಾಗಲೀ/ಸಹ ಪ್ರಾಧ್ಯಾಪಕರಾಗಲೀ ಇಲ್ಲದೇ ಇರುವುದರಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರಪ್ರೊ.ಎಂ.ಆರ್.ಗಂಗಾಧರ್ ಇವರನ್ನೇ ಮತ್ತೊಮ್ಮೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಿಂಡಿಕೇಟ್ ಸಭೆಯು ಅನುಮೋದಿಸಿತು.<br><br>ಪ್ರೊ. ಎಸ್.ವೆಂಕಟೇಶ್, ಪ್ರಾಧ್ಯಾಪಕರು, ತತ್ವಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರನ್ನು ದಿನಾಂಕ 01-06-2020 ರಿಂದ ಅನ್ವಯವಾಗುವಂತೆ ಎರಡು ವರ್ಷಗಳ ಅವಧಿಗೆ ವಿಭಾಗದ ಅಧ್ಯಕ್ಷರಾಗಿ ನೇಮಕ ಮಾಡಲಾಗಿತ್ತು. ಪ್ರಸ್ತುತ ಇವರು ದಿನಾಂಕ 31-03-2021ರಂದು ಸೇವೆಯಿಂದ ವಯೋನಿವೃತಿಯನ್ನು ಹೊಂದುತ್ತಿರುವುದರಿಂದ ವಿಭಾಗದ ಅಧ್ಯಕ್ಷರ ಅವಧಿಯು ಮುಕ್ತಾಯಗೊಳ್ಳುತ್ತದೆ. ಆದರೆ ತತ್ವಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಖಾಯಂಪ್ರಾಧ್ಯಾಪಕರಾಗಲೀ/ಸಹ ಪ್ರಾಧ್ಯಾಪಕರಾಗಲೀ ಇಲ್ಲದೇ ಇರುವುದರಿಂದ ಖಾಯಂ ಸಹಾಯಕ ಪ್ರಾಧ್ಯಾಪಕರಾಗಿ ಡಾ. ಡ್ಯಾನಿಯಲ್ ಅವರು ಜೇಷ್ಠತಾ ಪಟ್ಟಿಯಲ್ಲಿ ಇರುವುದನ್ನು ಗಮನಿಸಿದ ಸಭೆಯು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7) ಪ್ರಕಾರ ಡಾ.ಡ್ಯಾನಿಯಲ್ ಇವರನ್ನು ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.12 | ಚಾಮರಾಜನಗರ ಸ್ನಾತಕೋತ್ತರ ಕೇಂದ್ರದ ಬಗ್ಗೆ ಮಾಹಿತಿಯನ್ನು ಸಿಂಡಿಕೇಟ್ ಸಭೆಗೆ ಮಂಡಿಸುವ ಬಗ್ಗೆ. |
| | ಮಾನ್ಯ ಸಿಂಡಿಕೇಟ್ ಸದಸ್ಯರಾದ ಡಾ.ಈ.ಸಿ.ನಿಂಗರಾಜ ಗೌಡ ಅವರು ದಿನಾಂಕ 15.02.2021ರ ಪತ್ರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಸುವರ್ಣಗಂಗೋತ್ರಿಗೆ ಸಂಬಂಧಿಸಿದ ಮಾಹಿತಿಯನ್ನು ಕೋರಿರುತ್ತಾರೆ. ಈ ಸಂಬಂಧ ಸದರಿ ಕೇಂದ್ರದ ನಿರ್ದೇಶಕರು ನಿಖರವಾದ ಮಾಹಿತಿಯನ್ನು ಸಲ್ಲಿಸಿದ್ದು ಆ ಮಾಹಿತಿಗಳನ್ನು ಸಿಂಡಿಕೇಟ್ ಸಭೆಯ ಅವಗಾಹನೆಗಾಗಿ ಮಾನ್ಯ ಕುಲಪತಿಯವರು ಸಭೆಗೆ ಮಂಡಿಸಿದರು. |
| ತೀರ್ಮಾನ | ಚಾಮರಾಜನಗರ ಸ್ನಾತಕೋತ್ತರ ಕೇಂದ್ರದ ಬಗ್ಗೆ ನಿರ್ದೇಶಕರು ಸಲ್ಲಿಸಿರುವ ಮಾಹಿತಿಯನ್ನು ಸಿಂಡಿಕೇಟ್ ಸಭೆಯು ಗಮನಿಸಿತು. |
| ಸಾಮಾನ್ಯ ಸಭೆ 2021/2.13 | MYRA ಸ್ಕೂಲ್ ಆಫ್ ಬಿಸಿನೆಸ್, ಮೈಸೂರು ಇವರ ಸಂಸ್ಥೆಯಲ್ಲಿ Specialized Programme ಅಡಿಯಲ್ಲಿ BBA-Hons. (Marketing and Finance) ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಮಾನ್ಯತೆ ನೀಡುವ ಕುರಿತು ವಿಶ್ವವಿದ್ಯಾನಿಲಯದ ಪರಿವೀಕ್ಷಣಾ ಸಮಿತಿಯು ಸಲ್ಲಿಸಿರುವ ವರದಿಯ ಬಗ್ಗೆ. |
| | ದಿನಾಂಕ 10-02-2021ರಂದು ವಿಶ್ವವಿದ್ಯಾನಿಲಯದ ತಜ್ಞರ ಪರಿವೀಕ್ಷಣಾ ಸಮಿತಿಯು MYRA ಸ್ಕೂಲ್ |

| | |
|---|---|
| | ಆಫ್ ಬಿಸಿನೆಸ್, ಇನ್‌ಫೋಸಿಸ್ ಹತ್ತಿರ, ಪವರ್‌ಗ್ರಿಡ್ ಎದುರು, ಇಲವಾಲ, ಮೈಸೂರು ಇಲ್ಲಿಗೆ ಭೇಟಿ ನೀಡಲಾಗಿದ್ದು, ಸಮಿತಿಯ ಶಿಫಾರಸ್ಸು ಈ ಕೆಳಕಂಡಂತಿದೆ:<br><br>Expert committee recommends that granting of recognition under Specialized Programme in BBA-Hons. (Marketing and Finance) with an intake of 40 to MYRA School of Business, Near Infosys, Opp.Power Grid, Yelwal, Mysuru-571 130 under the provision of "The University of Mysore- Recognition of Certain Institutions for Specified Studies/Specialized and Research Statutes – 2008" from the academic year 2021-22". |
| ತೀರ್ಮಾನ | MYRAಸ್ಕೂಲ್ ಆಫ್ ಬಿಸಿನೆಸ್, ಮೈಸೂರು ಇವರ ಸಂಸ್ಥೆಯಲ್ಲಿSpecialized Programme ಅಡಿಯಲ್ಲಿ BBA-Hons. (Marketing and Finance) ಕೋರ್ಸನ್ನು 60 ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಾನ್ಯತೆ ನೀಡುವ ಬಗ್ಗೆ ವಿಶ್ವವಿದ್ಯಾನಿಲಯದ ಪರಿವೀಕ್ಷಣಾ ಸಮಿತಿಯುಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿರುವ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2021/2.14** | ಐ.ಓ.ಇ. ಯೋಜನೆಯಡಿಯಲ್ಲಿ ಖರೀದಿಸಿರುವ ವೈಜ್ಞಾನಿಕ ಉಪಕರಣವನ್ನು ಬಳಸಿಕೊಳ್ಳಲು ಬಳಕೆದಾರರಿಗೆ ಪರಿಷ್ಕೃತ ಸೇವಾ ಶುಲ್ಕವನ್ನು ನಿಗಧಿಪಡಿಸುವ ಬಗ್ಗೆ. |
| ತೀರ್ಮಾನ | ಐ.ಓ.ಇ. ಯೋಜನೆಯಡಿಯಲ್ಲಿ ಖರೀದಿಸಿರುವ ವೈಜ್ಞಾನಿಕ ಉಪಕರಣವನ್ನು ಬಳಸಿಕೊಳ್ಳಲು ದಿನಾಂಕ 18–01–2021ರ ಪ್ರಸ್ತಾವನೆಯ ಪತ್ರದಲ್ಲಿ ಐ.ಓ.ಇ ಯೋಜನೆಯ ಪ್ರಭಾರ ಸಂಯೋಜಕರು, Liquid Nitrogen ಗೆ M/s B.E.M.L, Mysore ಸಂಸ್ಥೆಯು ಪ್ರತಿ ಲೀಟರ್‌ಗೆ ರೂ.80/–ರ ಬದಲಿಗೆ ರೂ.60/–ರಂತೆ ಸರಬರಾಜು ಮಾಡಲು ದರ ನಿಗದಿಪಡಿಸಲು ಕೋರಿದ್ದ ಹಿನ್ನೆಲೆಯಲ್ಲಿ, ದಿನಾಂಕ 04–02–2021ರಲ್ಲಿ ಮಾನ್ಯ ಕುಲಪತಿಯವರ ಆದೇಶದನ್ವಯ ಪ್ರಸ್ತಾವನೆಯನ್ನು ಪುರಸ್ಕರಿಸಿ, ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುವ ವಿಶ್ವವಿದ್ಯಾನಿಲಯದ ಕ್ರಮವನ್ನು ಸಿಂಡಿಕೇಟ್ ಸಭೆಯು ಪರಿಶೀಲಿಸಿ, ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ 2021/2.15** | ಪಿಹೆಚ್.ಡಿ. ಕೋರ್ಸ್‌ವರ್ಕ್ ತರಗತಿ ಮತ್ತು ಪರೀಕ್ಷೆಗಳನ್ನು ವರ್ಷದಲ್ಲಿ ಎರಡು ಭಾರಿ ನಡೆಸುವ ಬಗೆಗೆ. |
| ತೀರ್ಮಾನ | ಪಿಹೆಚ್.ಡಿ.ಯ ಶಿಷ್ಯವೇತನಕ್ಕೆ ಆಯ್ಕೆಯಾದವರಿಗೆ ನಡೆಯುತ್ತಿದ್ದ ಕೋರ್ಸ್ ಪರೀಕ್ಷೆ 2–3 ವರ್ಷಗಳಿಗೊಮ್ಮೆ ನಡೆಯುತ್ತಿದ್ದು, ಇದರಿಂದ ಕೋರ್ಸ್ ಪೂರ್ಣಗೊಳಿಸುವವರಿಗೆ ತೊಂದರೆಯಾಗುತ್ತಿರುವುದನ್ನು ಮನಗಂಡು ಪಿಹೆಚ್.ಡಿ.ತಾತ್ಕಾಲಿಕ ನೋಂದಣಿ ಪಡೆದ ಅಭ್ಯರ್ಥಿಗಳು ಶೀಘ್ರವಾಗಿ ವ್ಯಾಸಂಗ ಮುಂದುವರಿಸಲು ಹಾಗೂ ಜೆಆರ್‌ಎಫ್ ಅಥವಾ ಶಿಷ್ಯವೇತನ ಪಡೆಯುವವರ ಅನುಕೂಲಕ್ಕಾಗಿ ಜೂನ್ ಮತ್ತು ಡಿಸೆಂಬರ್ ಮಾಹೆಯಲ್ಲಿ ಪಿಹೆಚ್.ಡಿ. ಕೋರ್ಸ್‌ವರ್ಕ್ ತರಗತಿ ಮತ್ತು ಪರೀಕ್ಷೆಗಳನ್ನು ಎರಡು ಬಾರಿ ನಡೆಸಲು ಅನುಮತಿಸಿ, ಶೈಕ್ಷಣಿಕ ವೇಳಾಪಟ್ಟಿಯ ಜೊತೆಯಲ್ಲಿ ಪಿಹೆಚ್.ಡಿ. ಕೋರ್ಸ್‌ವರ್ಕ್ ಸೇರಿಸಲು ಸಿಂಡಿಕೇಟ್ ಸಭೆಯು ತೀರ್ಮಾನಿಸಿತು. |
| **ಸಾಮಾನ್ಯ ಸಭೆ 2021/2.16** | ಮೈಸೂರು ವಿಶ್ವವಿದ್ಯಾನಿಲಯದ 2021–2022ನೇ ಸಾಲಿನ ಆಯವ್ಯಯ ಅಂದಾಜುಗಳ ವಿವರವನ್ನು ಸರ್ಕಾರಕ್ಕೆ ಸಲ್ಲಿಸಿರುವ ಬಗೆಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದ 2021–22ನೇ ಸಾಲಿನ ಆಯವ್ಯಯ ಅಂದಾಜುಗಳಿಗೆ "ಹಣಕಾಸು ಸಮಿತಿ" ಸಭೆಯ ಅನುಮೋದನೆ ಪಡೆದು, ಸರ್ಕಾರಕ್ಕೆ ಸಲ್ಲಿಸಿರುವ ವಿಶ್ವವಿದ್ಯಾನಿಲಯದ ಕ್ರಮವನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2021/2.17** | 2019–20 ಮತ್ತು 2020–21ನೇ ಶೈಕ್ಷಣಿಕ ಸಾಲಿಗೆ ವಾತ್ಸಲ್ಯ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಕಾಲೇಜಿನ ಸಂಯೋಜನೆ ಮುಂದುವರೆಸಲು ಸ್ಥಳೀಯ ವಿಚಾರಣಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ನೀಡಿರುವ ವರದಿಯನ್ನು ಅನುಮೋದಿಸುವ ಬಗ್ಗೆ. |
| | ದಿನಾಂಕ 27–01–2021 ಮತ್ತು 20–02–2021 ರಂದು ವಿಶ್ವವಿದ್ಯಾನಿಲಯದ ಸ್ಥಳೀಯ ವಿಚಾರಣಾ ಸಮಿತಿಯು ವಾತ್ಸಲ್ಯ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಇಲ್ಲಿಗೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಶಿಫಾರಸ್ಸನ್ನು ನೀಡಿರುತ್ತದೆ.<br>1. The committee recommends the continuation of temporary affiliation to Vathsalya College of Education, Mysore for 2 years B.Ed. programme with one basic unit of 50 students for the academic year 2019-20. |

| | |
|---|---|
| | 2. The committee recommends the continuation of temporary affiliation to Vathsalya College of Education, Mysore for 2 years B.Ed. Programme with one basic unit of 50 students for the academic year 2020-21. |
| ತೀರ್ಮಾನ | 2019–20 ಮತ್ತು 2020–21ನೇ ಶೈಕ್ಷಣಿಕ ಸಾಲಿಗೆ ವಾತ್ಸಲ್ಯ ಕಾಲೇಜ್ ಆಫ್ ಎಜುಕೇಷನ್, ಮೈಸೂರು ಕಾಲೇಜಿನ ಸಂಯೋಜನೆ ಮುಂದುವರೆಸಲು ಸ್ಥಳೀಯ ವಿಚಾರಣಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿರುವ ವರದಿ/ಶಿಫಾರಸ್ಸನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.18 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ 1. Nambiar Builders Pvt. Ltd.,-Gold Medal, 2. M.N. Associates-Gold Medal, 3. Shri Rakesh R., Gold Medal, 4. Shri H.R. Chandra Shekar-Gold Medal-ನಾಲ್ಕು ದತ್ತಿಗಳ ಸ್ಥಾಪನೆ ಮಾಡುವ ಬಗ್ಗೆ. |
| | 01. Nambiar Builders Ltd- Gold Medal, 02. M.N.Associates- Gold Medal, 03. Shri Rakesh R – Gold Medal, 04. Shri.H.R Chandra Shekar-Gold Medalಇವರುಗಳು 04 ಚಿನ್ನದ ಪದಕ ದತ್ತಿಗಳನ್ನು ಸ್ಥಾಪನೆ ಮಾಡಲು ಮೈಸೂರು ವಿಶ್ವವಿದ್ಯಾನಿಲಯಕ್ಕೆ ಅನುಮತಿ ಕೋರಿ ತಲಾ 1,05,000/–ರಂತೆ ಒಟ್ಟು 4,20,000/–ಗಳ ಡಿಡಿಗಳನ್ನು ನೀಡಿದ್ದು, 2019–20ನೇ ಸಾಲಿನಲ್ಲಿ ಸ್ನಾತಕೋತ್ತರ ಪದವಿಯM.Tech URPಸಂಬಂಧಿತ ವಿಷಯ/ಪತ್ರಿಕೆಯಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾದ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗೆ ಚಿನ್ನದ ಪದಕವನ್ನು ನೀಡಬೇಕೆಂದು ಕೋರಿರುತ್ತಾರೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಅನ್ವಯ ಪ್ರಕರಣ 31(2) (IX) ಪ್ರಕಾರ ದತ್ತಿಯ ಮೂಲಧನಕ್ಕೆ ಕ್ರೋಢೀಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20ರಷ್ಟು ದತ್ತಿಯ ಮೂಲ ಧನಕ್ಕೆ ಸೇರಿಸಿ ಉಳಿದ ಶೇ.80ರಷ್ಟು ಬಡ್ಡಿಯ ಹಣವನ್ನು ಸ್ನಾತಕೋತ್ತರ ಪದವಿಯ M.Tech URP ಸಂಬಂಧಿತ ವಿಷಯ/ಪತ್ರಿಕೆಯಲ್ಲಿ ಪ್ರಥಮ ಬಾರಿಗೆ ತೇರ್ಗಡೆಯಾದ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗೆ ಚಿನ್ನದ ಪದಕವನ್ನು ನೀಡಲು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.19 | ಡಾ. ಸರ್. ಎಂ. ವಿಶ್ವೇಶ್ವರಯ್ಯ ಅಧ್ಯಯನ ಪೀಠಕ್ಕೆ ಸಂದರ್ಶಕ ಪ್ರಾಧ್ಯಾಪಕರನ್ನು ಆಹ್ವಾನಿಸುವ ಬಗೆಗೆ. |
| ತೀರ್ಮಾನ | ಡಾ. ಸರ್.ಎಂ.ವಿಶ್ವೇಶ್ವರಯ್ಯ ಅಧ್ಯಯನ ಪೀಠಕ್ಕೆ ಸಂದರ್ಶಕ ಪ್ರಾಧ್ಯಾಪಕರನ್ನು ಒಂದು ವರ್ಷದ ಅವಧಿಗೆ ಮಾಹೆಯಾನ ರೂ. 8000/–ಗಳ ಗೌರವಧನ ಹಾಗೂ ವಿಶ್ವವಿದ್ಯಾನಿಲಯದ ಅತಿಥಿಗೃಹದಲ್ಲಿ ಉಚಿತ ವಸತಿ ಸೌಕರ್ಯದೊಂದಿಗೆ ನಿಯಮಾನುಸಾರ ನೇಮಕ ಮಾಡುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲು ಸಿಂಡಿಕೇಟ್ ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/2.20 | ಪ್ರಶ್ನೆಪತ್ರಿಕೆ ಕಾರ್ಯದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999ರ 4(ಜಿ) ಅಡಿಯಲ್ಲಿ ವಿನಾಯಿತಿಗೆ ಸಂಬಂಧಿಸಿದಂತೆ. |
| ತೀರ್ಮಾನ | ಸರ್ಕಾರದ ಅನುಮತಿಯನ್ನು ನಿರೀಕ್ಷಿಸಿ ಮುಂಬರುವ ಶೈಕ್ಷಣಿಕ ವೇಳಾಪಟ್ಟಿಯ ಅನುಸಾರವಾಗಿ ಪರೀಕ್ಷೆಗಳನ್ನು ಸುಗಮವಾಗಿ ನಡೆಸುವ ದೃಷ್ಟಿಯಿಂದ ಹಾಗೂ ಪರೀಕ್ಷೆಗಳ ಪಾವಿತ್ರ್ಯತೆ ಮತ್ತು ಗೌಪ್ಯತೆಯನ್ನು ಕಾಯ್ದುಕೊಳ್ಳುವ ಹಿತದೃಷ್ಟಿಯಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 4(ಜಿ) ಅಡಿಯಲ್ಲಿ ಈ ಹಿಂದೆ ನೀಡಿರುವ ವಿನಾಯಿತಿಯನ್ನು ಯಥಾಸ್ಥಿಯಲ್ಲಿ ಮುಂದುವರೆಸುವ ವಿಶ್ವವಿದ್ಯಾನಿಲಯದ ಕ್ರಮವನ್ನು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/2.21 | ವಿ. ಶ್ರೀನಿವಾಸರವರ ಪಿಹೆಚ್.ಡಿ. ಪದವಿ ದೂರಿನ ಬಗ್ಗೆ. |
| ತೀರ್ಮಾನ | ದಿನಾಂಕ 13–03–2019ರಂದು ಸಮಿತಿಯ ಶಿಫಾರಿಸಿನ ವರದಿಯನ್ನು ಗಮನಿಸಿದ ಸಭೆಯು ಶ್ರೀ. ಶ್ರೀನಿವಾಸರವರಿಗೆ ಪಿಹೆಚ್.ಡಿ ಪದವಿಯನ್ನು ನಿಯಮಾನುಸಾರ ಪ್ರಧಾನ ಮಾಡಿರುವುದನ್ನು ಗಮನಿಸಿತು. |
| ಸಾಮಾನ್ಯ ಸಭೆ 2021/2.22 | Promotions to University Teachers Under UGC-CAS |
| ತೀರ್ಮಾನ | The recommendations of the Selection Committee and Screening cum Evaluation Committee in various subjects for promotion of teachers in |

| | |
|---|---|
| | various disciplines to the higher AGP furnished at Annexure–A is approved. Further, the Syndicate has also decided to extend the monetary benefits to the teachers from the date of the Syndicate decision i.e 25-11-2020 or from the date of eligibility whichever is later. |
| ಸಾಮಾನ್ಯ ಸಭೆ 2021/2.23 | ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಲಯಗಳಲ್ಲಿ ಸೇವೆ ಸಲ್ಲಿಸಿದ ಬೋಧಕೇತರ ಸಿಬ್ಬಂದಿಗಳ ಜೇಷ್ಠತೆಯನ್ನು ಸೇವೆಗೆ ಸೇರಿದ ದಿನಾಂಕದಿಂದ ಪರಿಗಣಿಸುವ ಬಗ್ಗೆ. |
| ತೀರ್ಮಾನ | ಮಾನ್ಯ ಕುಲಪತಿಗಳು ಮಾತನಾಡಿ, ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಲಯಗಳಲ್ಲಿ ಸೇವೆ ಸಲ್ಲಿಸಿದ ಬೋಧಕೇತರ ಸಿಬ್ಬಂದಿಗಳು ಜೇಷ್ಠತೆಯನ್ನು ನೇಮಕವಾದ ದಿನಾಂಕದಿಂದ ಜೇಷ್ಠತೆಯನ್ನು ಪರಿಗಣಿಸಬೇಕೆಂದು ಮನವಿ ಸಲ್ಲಿಸಿರುತ್ತಾರೆ. ಈ ಸಂಬಂಧ ವಿಶ್ವವಿದ್ಯಾನಿಲಯದ ಕಾನೂನು ಸಲಹೆಗಾರರ ಅಭಿಪ್ರಾಯದಂತೆ, ನೇಮಕಗೊಂಡ ದಿನಾಂಕದಿಂದ ಜೇಷ್ಠತೆಯನ್ನು ವಿಸ್ತರಿಸಲು ಸಾಧ್ಯವಿಲ್ಲವೆಂದು ತಿಳಿಸಿ, ಹಿಂಬರಹಗಳನ್ನು ನೀಡಲಾಗಿರುತ್ತದೆ. ಸದರಿಯವರೊಂದಿಗೆ 2012ರ ಸಿಂಡಿಕೇಟ್ ನಿರ್ಣಯದನ್ವಯ ವಿಶ್ವವಿದ್ಯಾನಿಲಯದ ಸಾಮಾನ್ಯ ಜೇಷ್ಠತಾ ಪಟ್ಟಿಗೆ ಸೇರ್ಪಡೆಗೊಂಡ ಈ ಮೇಲೆ ತಿಳಿಸಿರುವ ನೌಕರರುಗಳಿಗೆ ನೇಮಕಗೊಂಡ ದಿನಾಂಕದಿಂದಲೇ ಜೇಷ್ಠತೆಯನ್ನು ವಿಸ್ತರಿಸಲು ಸಾಧ್ಯವಿಲ್ಲ. ಏಕೆಂದರೆ ಇವರಿಂದ ಜೇಷ್ಠತೆಯಲ್ಲಿ ತುಂಬಾ ವ್ಯತ್ಯಾಸವಾಗುತ್ತದೆ. ಇದರಿಂದ ವಿಪರೀತ ಏರುಪೇರುಗಳು ಉಂಟಾಗಿ ಗೊಂದಲವಾಗುವ ಸಂದರ್ಭವೇ ಹೆಚ್ಚಿರುತ್ತದೆ ಹಾಗೂ ಪ್ರಸ್ತುತ ಸಂದರ್ಭದಲ್ಲಿ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿದ್ದೇ ಆದಲ್ಲಿ ನೌಕರರುಗಳಲ್ಲಿ ಗಲಾಟೆ/ಗೊಂದಲವುಂಟಾಗುವ ಸಂದರ್ಭವು ಹೆಚ್ಚಿರುತ್ತದೆಂದು ಸಭೆಯಲ್ಲಿ ತಿಳಿಸಿದರು.<br><br>ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಲಯಗಳಲ್ಲಿ ಸೇವೆ ಸಲ್ಲಿಸಿದ ಬೋಧಕೇತರ ಸಿಬ್ಬಂದಿಗಳು ಜೇಷ್ಠತೆಯನ್ನು ನೇಮಕವಾದ ದಿನಾಂಕದಿಂದ ಜೇಷ್ಠತೆಯನ್ನು ಪರಿಗಣಿಸಬೇಕೆಂದು ಮನವಿಯ ಬಗ್ಗೆ ಕೂಲಂಕಷವಾಗಿ ಚರ್ಚಿಸಿದ ಸಭೆಯು ಮತ್ತೊಮ್ಮೆ ವಿಶ್ವವಿದ್ಯಾನಿಲಯದ ಕಾನೂನು ಸಲಹೆಗಾರ ಅಭಿಪ್ರಾಯ ಪಡೆದು ಸರ್ಕಾರಕ್ಕೆ ಪತ್ರ ಬರೆಯಲು ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2021/2.24 | ಸ್ಕೂಲ್ ಆಫ್ ಪ್ಲಾನಿಂಗ್ ಅಂಡ್ ಆರ್ಕಿಟೆಕ್ಚರ್‌ನ ನಿರ್ದೇಶಕರ ನೇಮಕಾತಿಯ ಬಗೆಗೆ. |
| ತೀರ್ಮಾನ | The Syndicate decided to appoint two HOD's one for planning and another for architecture and one director for school of planning and architecture on adhoc basis as pending approval of statutes under COA rules and regulations. |

<u>ಇತರೆ ವಿಷಯಗಳು:</u>

- ಶ್ರೀ ಎಸ್.ಡಿ.ದೊಡ್ಡಚಾರಿ ಅವರು ಮಾತನಾಡಿ, ಸ್ವಯಂ ಹಣಕಾಸು ಯೋಜನೆ (ಎಸ್‌ಎಫ್‌ಎಸ್) ಮತ್ತು ಭಾಗಶ: ಸ್ವಯಂ ಹಣಕಾಸು ಯೋಜನೆ (ಪಿಎಸ್‌ಎಫ್‌ಎಸ್)ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಭಾಗಗಳು/ಕೋರ್ಸುಗಳು, ಇದರಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಉದ್ಯೋಗಿಗಳ ವಿವರ, ಕಳೆದ ಐದು ವರ್ಷಗಳ ಅವಧಿಯಲ್ಲಿ ಸಂಗ್ರಹಿಸಲಾದ ಅನುದಾನದ ವಿವರ ಮತ್ತು ವ್ಯಾಸಂಗ ಮಾಡಿದ ವಿದ್ಯಾರ್ಥಿಗಳ ಸಂಖ್ಯೆಗಳ ಬಗ್ಗೆ ವಿವರವನ್ನು ಕೋರಲಾಗಿದ್ದು, ವಿಶ್ವವಿದ್ಯಾನಿಲಯವು ಕೋರಿರುವ ಮಾಹಿತಿಗಳಿಗೆ ಇದುವರೆವಿಗೂ ಸಮಂಜಸವಾದ ಉತ್ತರವನ್ನು ನೀಡಿರುವುದಿಲ್ಲವೆಂದು ತಿಳಿಸಿದರು.
  - ಇದಕ್ಕೆ ಸ್ಪಂದಿಸಿದ ಮಾನ್ಯ ಕುಲಪತಿಯವರು ಮಾತನಾಡಿ, ದಿನಾಂಕ: 10-03-2021ರೊಳಗೆ ವಿಶೇಷ ಸಿಂಡಿಕೇಟ್ ಸಭೆಯನ್ನು ನಡೆಸಲಾಗುವುದು. ಸದರಿ ಸಭೆಯಲ್ಲಿ ಸ್ಪಷ್ಟ ಮಾಹಿತಿಯೊಂದಿಗೆ ಚರ್ಚಿಸಲಾಗುವುದೆಂದು ತಿಳಿಸಿದರು.
- ಶ್ರೀ ಎಸ್.ಡಿ.ದೊಡ್ಡಚಾರಿ ಹಾಗೂ ಡಾ.ಎಂ.ಎಸ್.ದಾಮೋಧರ ಅವರುಗಳು ಮಾತನಾಡಿ, ಸಿಂಡಿಕೇಟ್ ಸದಸ್ಯರುಗಳಿಗೆ ಕಳುಹಿಸುವ ಸಭೆಯ ನಡವಳಿಯಲ್ಲಿ ಪ್ರತಿ ಪುಟದಲ್ಲೂ ಕುಲಸಚಿವರ ದೃಢೀಕೃತ ಸಹಿ ನಮೂದಾಗಿರಬೇಕು ಹಾಗೂ ಸಿಂಡಿಕೇಟ್ ಸಭೆಯಲ್ಲಿ ಕೈಗೊಳ್ಳುವ ತೀರ್ಮಾನಗಳನ್ನು ತಡಮಾಡದೇ ಕಾರ್ಯಗತಗೊಳಿಸಬೇಕೆಂದು ತಿಳಿಸಿದರು.

- ಪ್ರೊ.ವೆಂಕಟೇಶ್‌ಕುಮಾರ್ ಅವರು ಮಾತನಾಡಿ, ಸಿಂಡಿಕೇಟ್ ಸದಸ್ಯರುಗಳಿಗೆ ರವಾನಿಸುವ ನಡವಳಿಯ ಪ್ರತಿಯೊಂದಿಗೆ Action Taken Report ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಿಸಿದರು.
- ಮೈಸೂರು ವಿಶ್ವವಿದ್ಯಾನಿಲಯದ ಆಡಳಿತಾತ್ಮಕ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳ ಸೇವಾವಧಿಯು ಮೂರು ವರ್ಷ ಪೂರ್ಣಗೊಂಡಿರುವವರನ್ನು ಬಿಡುಗಡೆ ಮಾಡಿ, ಈ ಹುದ್ದೆಗಳಿಗೆ ಸಾಮಾಜಿಕ ನ್ಯಾಯದ ಆಧಾರದ ಹಿನ್ನೆಲೆಯಲ್ಲಿ ನೇಮಕ ಮಾಡುವ ಸಂಬಂಧ ನಾಲ್ಕು ತಿಂಗಳ ಹಿಂದೆಯೇ ಸಿಂಡಿಕೇಟ್ ತೀರ್ಮಾನ ಕೈಗೊಂಡಿತ್ತು.ಆದರೆ, ಈ ಪ್ರಸ್ತಾವನೆಯನ್ನು ಇದುವರೆವಿಗೂ ಅನುಷ್ಠಾನಗೊಳಿಸಿರುವುದಿಲ್ಲವೆಂದು ಶ್ರೀ ದೊಡ್ಡಚಾರಿ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಮಾತನಾಡಿದ ಡಾ.ಜಿ.ವೆಂಕಟೇಶ್‌ಕುಮಾರ್ ಅವರು ಸಿಂಡಿಕೇಟ್ ಸಭೆಯು ಉನ್ನತ ಪ್ರಾಧಿಕಾರದ ಸಭೆಯಾಗಿರುತ್ತದೆ. ಈ ಸಭೆಯಲ್ಲಿ ತೆಗೆದುಕೊಳ್ಳುವ ತೀರ್ಮಾನಗಳು ಕಾರ್ಯಗತಗೊಳಿಸುವುದು ಸೂಕ್ತವೆಂದು ತಿಳಿಸುತ್ತಾ, ಆಡಳಿತಾತ್ಮಕ ಹುದ್ದೆಗಳಲ್ಲಿ ನೇಮಕ ಮಾಡುವ ವಿಶೇಷ ಅಧಿಕಾರಿಗಳನ್ನು ಸಾಮಾಜಿಕ ನ್ಯಾಯದ ಆಧಾರದ ಮೇಲೆ ನಿಯೋಜನೆ ಮಾಡಬೇಕೆಂದು ತಿಳಿಸಿದರು. ಈ ಪ್ರಸ್ತಾವನೆಗೆ ಡಾ.ಎಂ.ಎಸ್.ದಾಮೋಧರ ಅವರು ದನಿಗೂಡಿಸಿದರು.
- ಡಾ.ಚೈತ್ರ ನಾರಾಯಣ ಅವರು ಮಾತನಾಡಿ, ಕೆಲವೊಂದು ವಿಭಾಗಗಳಲ್ಲಿ ಎಲ್ಲಾ ಮಾಹಿತಿಗಳು ಸಮಂಜಸವಾಗಿದ್ದರೂ ಪಿಹೆಚ್.ಡಿ ವಿದ್ಯಾರ್ಥಿಗಳ ಹುಂಡಿಗಳಿಗೆ/ವರದಿಗಳಿಗೆ ಸಹಿ ಮಾಡದೇ ಗೊಂದಲಗಳನ್ನು ಸೃಷ್ಟಿಸಿ ಪಿಹೆಚ್.ಡಿ ವಿದ್ಯಾರ್ಥಿಗಳಿಗೆ ತೊಂದರೆ ನೀಡುತ್ತಿರುವ ಅಂಶಗಳು ಗಮನಕ್ಕೆ ಬಂದಿರುತ್ತದೆಂದು ಸಭೆಗೆ ತಿಳಿಸಿದರು.
- ಶ್ರೀ ಆರ್.ಪ್ರದೀಪ್ ಕುಮಾರ್ ದೀಕ್ಷಿತ್ ಅವರು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರದ ಅಭಿವೃದ್ಧಿಗೆ ಶ್ರಮಿಸಿರುವವರ ಸತ್ಯಾಸತ್ಯತೆ ಮಾಹಿತಿಯನ್ನು ಸಭೆಯಲ್ಲಿ ಪ್ರಸ್ತಾಪಿಸಬೇಕು. ಇದರೊಂದಿಗೆ ಸದರಿ ಕೇಂದ್ರದಲ್ಲಿರುವ ಮೂಲಭೂತ ಸೌಕರ್ಯಗಳು, ದಾಸ್ತಾನು ಪರಿಶೀಲನೆ ವರದಿ ಮತ್ತು ಸದರಿ ಕೇಂದ್ರವನ್ನೊಳಗೊಂಡಿರುವ ಭೂವಿಸ್ತೀರ್ಣಗಳನ್ನು ನಿಖರವಾಗಿ ನೀಡಬೇಕೆಂದು ತಿಳಿಸಿದರು.

  ಈ ಸಂಬಂಧ ಮಾತನಾಡಿದ ಮಾನ್ಯ ಕುಲಪತಿಯವರು, ಸದರಿ ಕೇಂದ್ರದ ಮೂಲಭೂತ ಸೌಕರ್ಯಗಳು, ದಾಸ್ತಾನು ಪರಿಶೀಲನೆ ಹಾಗೂ ಭೂವಿಸ್ತೀರ್ಣಗಳನ್ನು ನಿಖರವಾಗಿ ಪರಿಶೀಲಿಸಲು ಎಸ್ಟೇಟ್ ಅಧಿಕಾರಿಯವರು ಮತ್ತು ಉಪಕುಲಸಚಿವ(ಸಾಮಾನ್ಯ) ರವರನ್ನು ನೇಮಕ ಮಾಡಲಾಗುವುದು. ಸದರಿಯವರು ಪರಿಶೀಲಿಸಿ ನೀಡುವ ವರದಿಯ ಆಧಾರದ ಮೇಲೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದೆಂದು ತಿಳಿಸಿದರು.

- ಡಾ.ಎಂ.ಎಸ್.ದಾಮೋಧರ ಅವರು ಮಾತನಾಡಿ, ಪ್ರಸ್ತುತ ನೇಮಕವಾಗಿರುವ ಅತಿಥಿ ಉಪನ್ಯಾಸಕರುಗಳಿಗೆ ಅರ್ಹತೆ ಇರುವವರನ್ನು ನೇಮಕ ಮಾಡದೇ, ಅರ್ಹತೆಯುಳ್ಳವರು ಇದ್ದರೂ ಪರಿಗಣಿಸದೇ ಪಿಹೆಚ್.ಡಿ ಪದವಿ/ನೆಟ್/ಕೆ-ಸೆಟ್ ಆಗಿಲ್ಲದಿರುವವರನ್ನು ನೇಮಕ ಮಾಡಿರುವುದು ಕಂಡು ಬಂದಿದೆ. ಆದ್ದರಿಂದ ಇನ್ನು ಮುಂದೆ ಅತಿಥಿ ಉಪನ್ಯಾಸಕರುಗಳ ನೇಮಕಾತಿಯನ್ನು ಸಂದರ್ಶನ ಮುಖಾಂತರ ಅರ್ಹ ಅಭ್ಯರ್ಥಿಗಳನ್ನು ನೇಮಕ ಮಾಡಬೇಕೆಂದು ಆಗ್ರಹಿಸಿದರು.

- ಇದಕ್ಕೆ ಸ್ಪಂದಿಸಿದ ಮಾನ್ಯ ಕುಲಪತಿಯವರು ಮಾತನಾಡಿ, ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಕೋವಿಡ್-19 ಇದ್ದ ಪ್ರಯುಕ್ತ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರುಗಳನ್ನು ಪ್ರಸಕ್ತ ಸಂದರ್ಭದಲ್ಲೂ ವಿಶೇಷ ಪ್ರಕರಣವೆಂಬಂತೆ ಸರ್ಕಾರದ ಸೂಚನೆಯಂತೆ ನೇಮಕಾತಿ ಮಾಡಲಾಗಿದೆಯೇ ಹೊರತು, ಮತ್ಯಾವುದೇ ಕಾರಣಗಳಿಲ್ಲ ಎಂದು ತಿಳಿಸಿ ಮುಂದಿನ ಶೈಕ್ಷಣಿಕ ಸಾಲಿನಿಂದ ಸಂದರ್ಶನದ ಮುಖಾಂತರ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಲಾಗುವುದೆಂದು ತಿಳಿಸಿದರು.

ಕುಲಸಚಿವ ಮತ್ತು ಸದಸ್ಯ ಕಾರ್ಯದರ್ಶಿ

ಕುಲಪತಿ ಮತ್ತು ಅಧ್ಯಕ್ಷರು